ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 7–8–2017

# ಪತ್ರಿಕಾ ಆಮಂತ್ರಣ

**1) ಮಾಜಿ ಮುಖ್ಯಮಂತ್ರಿ ದಿ.ನಿಜಲಿಂಗಪ್ಪನವರ 17 ನೇ ಪುಣ್ಯತಿಥಿ:**
**ಪ್ರತಿಮೆಗೆ ಮಾಲಾರ್ಪಣೆ:**
**ಸಿದ್ದರಾಮಯ್ಯ,**
**ಮುಖ್ಯಮಂತ್ರಿಗಳು,**
**ಕರ್ನಾಟಕ ಸರ್ಕಾರ**

**ದಿನಾಂಕ: 08–8–2017 ಮಂಗಳವಾರ ಸಮಯ: ಬೆಳಿಗ್ಗೆ 10–00 ಗಂಟೆಗೆ**
**ಸ್ಥಳ: ವಿಧಾನ ಸೌಧದ ಪಶ್ಚಿಮ ದಿಕ್ಕಿನಲ್ಲಿರುವ ಅವರ ಪ್ರತಿಮೆ ಬಳಿ**

**2) ಅ) ಸರ್ಕಾರಿ ಇಲಾಖೆಗಳ ಆಡಳಿತದಲ್ಲಿ ಕನ್ನಡ ಭಾಷೆಯ ಬಳಕೆ ಕುರಿತ ಪ್ರಗತಿ ಪರಿಶೀಲನೆ:**
**ಪ್ರೊ. ಸಿದ್ದರಾಮಯ್ಯ,**
**ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ**

**ದಿನಾಂಕ: 08–8–2017 ಮಂಗಳವಾರ ಸಮಯ: ಬೆಳಿಗ್ಗೆ 10–30 ಗಂಟೆಗೆ**
**ಸ್ಥಳ: ಪ್ರವಾಸೋದ್ಯಮ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು**

**ಆ) ಸರ್ಕಾರಿ ಇಲಾಖೆಗಳ ಆಡಳಿತದಲ್ಲಿ ಕನ್ನಡ ಭಾಷೆಯ ಬಳಕೆ ಪ್ರಗತಿ ಪರಿಶೀಲನೆ:**

**ದಿನಾಂಕ: 08–8–2017 ಮಂಗಳವಾರ ಸಮಯ: ಮಧ್ಯಾಹ್ನ 12–00ಗಂಟೆಗೆ**
**ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಕಛೇರಿ, ಲೋಕೋಪಯೋಗಿ ಇಲಾಖೆ ವಿಕಾಸ ಸೌಧ, ಬೆಂಗಳೂರು**

**3) ಡಾ. ಎಂ.ಎಚ್.ಮರಿಗೌಡ ಅವರ 101ನೇ ಜನ್ಮದಿನ ಸ್ಮರಣಾರ್ಥ "ತೋಟಗಾರಿಕೆ ದಿನಾಚರಣೆ"**

**ಉದ್ಘಾಟನೆ: ಆರ್.ವಿ.ದೇವರಾಜ್, ಶಾಸಕರು ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ**

**ದಿನಾಂಕ: 08–8–2017 ಮಂಗಳವಾರ ಸಮಯ: ಬೆಳಿಗ್ಗೆ 8–30 ಗಂಟೆಗೆ**
**ಸ್ಥಳ: ಲಾಲ್ ಬಾಗ್ ಮುಖ್ಯದ್ವಾರದ ಬಳಿ, ಬೆಂಗಳೂರು**

**ಡಾ: ಎಂ.ಹೆಚ್. ಮರಿಗೌಡ ಸ್ಮಾರಕ ವಿಚಾರಧಾರೆ**
**ದಿನಾಂಕ: 08–8–2017 ಮಂಗಳವಾರ ಸಮಯ: ಬೆಳಿಗ್ಗೆ 9–30 ರಿಂದ 1 ಗಂಟೆವರೆಗೆ**
**ಸ್ಥಳ: ತೋಟಗಾರಿಕೆ ಮಾಹಿತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು**

## ಪತ್ರಿಕಾ ಪ್ರಕಟಣೆ

**ರಾಜ್ಯದಲ್ಲಿ ಸಕಾಲಕ್ಕೆ ನಿರೀಕ್ಷಿತ ಮಳೆ ಬರದ ಛಾಯೇ ಆವರಿಸಿದೆ: ಟಿ.ಬಿ. ಜಯಚಂದ್ರ**

**ಬೆಂಗಳೂರು, ಆಗಸ್ಟ್ 7 (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿ ಸಕಾಲಕ್ಕೆ ನಿರೀಕ್ಷಿತ ಮಳೆ ಬೀಳದ ಹಿನ್ನೆಲೆಯಲ್ಲಿ ಬರದ ಛಾಯೇ ಆವರಿಸಿದೆ ಎಂದು ಕಾನೂನು ಸಚಿವ ಟಿ.ಬಿ. ಜಯಚಂದ್ರ ಅವರು ತಿಳಿಸಿದರು.

ವಿಧಾನ ಸೌಧದ ತಮ್ಮ ಕಛೇರಿಯಲ್ಲಿ ಇಂದು ಭೇಟಿ ಮಾಡಿದ ಪತ್ರಕರ್ತರನ್ನುದ್ದೇಶಿ ಮಾತನಾಡಿದ ಕಾನೂನು ಸಚಿವರು ಕಳೆದ 16 ವರ್ಷಗಳಲ್ಲಿ 13 ವರ್ಷ ರಾಜ್ಯ ಬರಗಾಲದಿಂದ ತತ್ತರಿಸಿದೆ. ರಾಜ್ಯದಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳ ಮೇವಿಗೂ ತೊಂದರೆಯಾಗುತ್ತಿದೆ ಸರ್ಕಾರ ಜನರಿಗೆ ಉತ್ತಮ ಕುಡಿಯುವ ನೀರು ಸರಬರಾಜಿಗೆ ಹಾಗೂ ಜಾನುವಾರುಗಳಿಗೆ ಮೇವು ಸರಬರಾಜು ಮಾಡಲು ಎಲ್ಲ ಅಗತ್ಯ ಕ್ರಮ ಕೈಗೊಂಡಿದೆ ಎಂದರು.

ರಾಜ್ಯದಲ್ಲಿ ಈ ವರ್ಷದ ತುಮಕೂರು, ಚಿಕ್ಕಮಗಳೂರು ಹಾಸನ ಜಿಲ್ಲೆಗಳು ಸೇರಿದಂತೆ ಇತರೆ ಜಿಲ್ಲೆಗಳಲ್ಲಿ 5.06 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ತೆಂಗು ಬೆಳೆಸಲಾಗಿತ್ತು. ಸುಮಾರು 2.6 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ಅಡಿಕೆ ಬೆಳೆಸಲಾಗಿದ್ದು, ಬರಗಾಲದ ಪರಿಣಾಮ ಅದರಲ್ಲಿ 1.91 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ತೆಂಗು ಬೆಳೆ ನಷ್ಠವಾಗಿದ್ದು 0.51 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆದ ಅಡಿಕೆ ಬೆಳೆ ನಷ್ಟವಾಗಿವೆ ಎಂದು ವಿವರಣೆ ನೀಡಿದ ಸಚಿವರು ಇತಿಹಾಸದಲ್ಲಿಯೇ ಈ ತರಹದ ಅಡಿಕೆ, ಹಾಗೂ ತೆಂದು ಬೆಳೆ ನಾಶ ಆಗಿರಲಿಲ್ಲ ಎಂದು ತಿಳಿಸಿದರು.

ಕಾವೇರಿ ನದಿ ನೀರಿನ ವಿಚಾರವಾಗಿ ಸುಪ್ರೀಂಕೋರ್ಟ್‌ನಲ್ಲಿ ವಿಚಾರಣೆ ನಡೆಯುತ್ತಿದ್ದು ನಿನ್ನೆ ನೀರಾವರಿ ಸಚಿವರು ದೆಹಲಿಯಲ್ಲಿ ತಾಂತ್ರಿಕ ಸಿಬ್ಬಂದಿಗಳೊಂದಿಗೆ ಚರ್ಚಿಸಿದ್ದಾರೆ ಎಂದು ಮಾತನಡಿದ ಕಾನೂನು ಸಚಿವ ಟಿ.ಬಿ. ಜಯಚಂದ್ರ ಅವರು ಇದೇ 9 ರಂದು ಕಾವೇರಿ ನದಿ ವಿಚಾರವಾಗಿ ಮುಖ್ಯಮಂತ್ರಿ ಅವರು ಸಭೆ ನಡೆಸಲಿದ್ದಾರೆ ಎಂದರು..

ಕರಾವಳಿ ಭಾಗಕ್ಕೆ ಪ್ರತ್ಯೇಕ ಮರಳು ಜಾತಿ ತರುವ ಸಂಬಂಧ ಚಿಂತನೆ ನಡೆಸಲಾಗಿದ್ದು ಮುಂಬರುವ ಸಚಿವ ಸಂಪುಟದ ಉಪ ಸಮಿತಿಯಲ್ಲಿ ಚರ್ಚಿಸಿ ಕ್ರಮಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

18/18

# ಭೇಟಿ ಬಚಾವ್ರೋ ಭೇಟಿ ಪಡಾವ್ರೋ ಯೋಜನೆ ಹೆಸರಿನಲ್ಲಿ ವಂಚನೆ

ಬೆಂಗಳೂರು, ಆಗಸ್ಟ್ 7 (ಕರ್ನಾಟಕ ವಾರ್ತೆ)

ಭೇಟಿ ಬಚಾವ್ರೋ ಭೇಟಿ ಪಡಾವ್ರೋ ಕಾರ್ಯಕ್ರಮದಡಿಯಲ್ಲಿ ರೂ. 2.00 ಲಕ್ಷ ನಗದು ನೀಡುವುದಾಗಿ ಕೆಲವು ಅನಧಿಕೃತ ಸಂಘಟನೆಗಳು/ಸ್ವಯಂ ಸೇವಾ ಸಂಸ್ಥೆಗಳು/ವ್ಯಕ್ತಿಗಳು ಹೆಣ್ಣು ಮಕ್ಕಳ ವೈಯಕ್ತಿಕ ಮಾಹಿತಿಯನ್ನು ಪಡೆದು ವಂಚಿಸುತ್ತಿರುವುದು ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವಾಲಯದ ಗಮನಕ್ಕೆ ಬಂದಿದ್ದು ಇಂತಹವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದೆ.

ಈ ಕುರಿತು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಪತ್ರವನ್ನು ಬರೆದಿದ್ದು ಮುಗ್ಧ ಹೆಣ್ಣು ಮಕ್ಕಳನ್ನು ಸುಳ್ಳು ಭರವಸೆ ನೀಡಿ ಮೋಸಮಾಡುವುದು ಕಾನೂನು ಬಾಹಿರವಾಗಿರುತ್ತದೆ. ಭೇಟಿ ಬಚಾವ್ರೋ ಭೇಟಿ ಪಡಾವ್ರೋ ಕಾರ್ಯಕ್ರಮದಲ್ಲಿ ಇಂತಹ ಯಾವುದೇ ನಗದು ನೀಡುವ ಕಾರ್ಯಕ್ರಮ ಇರುವುದಿಲ್ಲ. ವಂಚಕರ ವಿರುದ್ಧ ಕ್ರಮತೆಗೆದುಕೊಳ್ಳಲು ಸೂಚಿಸಲಾಗಿದೆ.

ಸಾರ್ವಜನಿಕರ ಗಮನಕ್ಕೆ:

ಇಂತಹ ವಂಚಕರ ಬಲೆಗೆ ಬೀಳದಂತೆ ಸಾರ್ವಜನಿಕರಿಗೆ ಸಲಹೆ/ಸೂಚನೆ ನೀಡಲಾಗಿದೆ. ಈ ಯೋಜನೆಯಡಿ ವಂಚಕರು ನಮೂನೆಯಲ್ಲಿ ಕೋರುವ ಯಾವುದೇ ವೈಯಕ್ತಿಕ ವಿವರಗಳನ್ನು ಅಂದರೆ ಆಧಾರ್ ಕಾರ್ಡ್, ಬ್ಯಾಂಕ್ ವಿವರಗಳು, ದೂರವಾಣಿ/ಮೊಬೈಲ್ ಸಮಖ್ಯೆ/ಇ–ಮೇಲ್ ಐ.ಡಿ/ಇತರೆ ಯಾವುದೇ ಮಾಹಿತಿಗಳನ್ನು ಬಹಿರಂಗಪಡಿಸಬಾರದು.

ಇಂತಹ ವಂಚನೆಗಳನ್ನು ಮಾಡುವವರ ಬಗ್ಗೆ ವ್ಯಕ್ತಿಗಳ/ಸಂಸ್ಥೆಗಳ ಹೆಸರನ್ನು ಸ್ಥಳೀಯ ಪೊಲೀಸ್ ಠಾಣೆಗೆ ತಿಳಿಸಬೇಕು.

ನಿಮ್ಮ ಸ್ನೇಹಿತರು, ಸಂಬಂಧಿಕರು ಹಾಗೂ ನಿಮ್ಮನ್ನು ಸಂಪರ್ಕಿಸುವ ಎಲ್ಲರಿಗೂ ಇಂತಹ ವಂಚಕರ ವಿರುದ್ಧ ಜಾಗರೂಕರಾಗಿರುವಂತೆ ತಿಳಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಕಟಣೆ ತಿಳಿಸಿದೆ.

ಜೆಡಿ:

## ಧೈರ್ಯ ಸಾಹಸ ಪ್ರದರ್ಶಿಸಿದ ಮಕ್ಕಳಿಗೆ ನೀಡುವ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಗೆ ನಾಮ ನಿರ್ದೇಶನಕ್ಕೆ ಆಹ್ವಾನ

**ಬೆಂಗಳೂರು, ಆಗಸ್ಟ್ 7 (ಕರ್ನಾಟಕ ವಾರ್ತೆ)**

ಕರ್ನಾಟಕ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ 6 ರಿಂದ 18 ವರ್ಷದೊಳಗಿನ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ ಬಾಲಕರಿಗೆ "ಹೊಯ್ಸಳ" ಮತ್ತು ಬಾಲಕಿಯರಿಗೆ "ಕೆಳದಿ ಚೆನ್ನಮ್ಮ" ಪ್ರಶಸ್ತಿಯನ್ನು ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರದಾನ ಮಾಡುತ್ತದೆ. ಪ್ರಕರಣವು ಆಗಸ್ಟ್ 2016 ರಿಂದ ಜುಲೈ 2017ರೊಳಗೆ ನಡೆದಿರಬೇಕು. ದಿನಾಂಕ: 01.08.1999 ರಂದು ಹಾಗೂ ನಂತರ ಜನಿಸಿದ ಮಕ್ಕಳು ಈ ಪ್ರಶಸ್ತಿಗೆ ಅರ್ಹರಾಗಿರುತ್ತಾರೆ.

ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000/-ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ.

2017ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ದಿನಾಂಕ:31.08.2017ರೊಳಗೆ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು.



## APPLICATIONS INVITED FOR HOYSALA AND KELADI CHENNAMMA BRAVERY AWARD FOR CHILDREN

Bangalore, August 7(Karnataka Information)

The Department of Women and Child Development, Government of Karnataka on the occasion of Children's Day, confers Bravery Award for the Children in the age group of 6 to 18 years who have exhibited exceptional

courage and presence of mind to save the life of others in dangerous circumstances. Boys are identified under “Hoysala” and girls under “Keladi Chennamma” Award. The incident should have occurred between August 2016 to July 2017. Children born on or after 01.08.1999 are eligible for this Award.

The Award carries cash prize of Rs. 10,000/- and a citation.

The prescribed forms for the year 2017 may be obtained from the Deputy Director of Women & Child Development Department in the respective districts. The filled applications should be submitted to the concerned District Deputy Director of Women & Child Development Department on or before 31.08.2017. The applications should be submitted in kannada only.

21/21

## ಸಭೆ

**ಬೆಂಗಳೂರು, ಆಗಸ್ಟ್ 7 (ಕರ್ನಾಟಕ ವಾರ್ತೆ)**

**ಶಿಕ್ಷಕರ/ಪದವೀಧರರ ಕ್ಷೇತ್ರದ ವಿಧಾನ ಪರಿಷತ್ ಸದಸ್ಯರು ಹಾಗೂ ಪ್ರಾಥಮಿಕ ಶಾಲೆಯಿಂದ ಉನ್ನತ ಶಿಕ್ಷಣದ ಆಡಳಿತ ಮಂಡಳಿಯ ಶಿಕ್ಷಕ/ಶಿಕ್ಷಕೇತರ ಸಂಘಟನೆಗಳ ಅಧ್ಯಕ್ಷರು/ಪದಾಧಿಕಾರಿಗಳನ್ನೊಳಗೊಂಡ ಸಭೆಯನ್ನು ದಿನಾಂಕ 10–8–2017 ರ ಗುರುವಾರ ಬೆಳಿಗ್ಗೆ 10–30 ಕ್ಕೆ ಶಾಸಕರ ಭವನ–2 ರ ಸಮ್ಮೇಳನ ಸಭಾಂಗಣದಲ್ಲಿ ಉಪಸಭಾಪತಿ ಶ್ರೀ ಮರಿತಿಬ್ಬೇಗೌಡ ಅವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

**22/22**

**23/23**

## "ಸಾಮಾಜಿಕ ಪರಿಣಾಮ ನಿರ್ಧಾರಣಾ ಅಧ್ಯಯನ"

**ಬೆಂಗಳೂರು, ಆಗಸ್ಟ್ 7 (ಕರ್ನಾಟಕ ವಾರ್ತೆ)**

**ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರ ಹಕ್ಕು, ಪುನರ್ವಸತಿ ಮತ್ತು ಪುನರ್‌ನಿರ್ಮಾಣ ಕಾಯ್ದೆ 2013 ರ ಕಲಂ –77(2) (ಎ) ಮತ್ತು (ಸಿ) ರನ್ವಯ "ಸಾಮಾಜಿಕ ಪರಿಣಾಮ**

ನಿರ್ಧರಣಾ ಅಧ್ಯಯನ" ವರದಿಯನ್ನು ಮೌಲ್ಯಮಾಪನ ಮಾಡಿ, ಸಲಹೆ/ಶಿಫಾರಸ್ಸುಗಳನ್ನು ನೀಡುವ ತಂಡವು ಅಧಿಕಾರೇತರ ಸಾಮಾಜಿಕ ವಿಜ್ಞಾನಿಗಳು ಹಾಗೂ ಪುನರ್ವಸತಿ ಮತ್ತು ಪುನರ್‌ವ್ಯವಸ್ಥೆ ವಿಷಯದಲ್ಲಿನ ಪರಿಣಿತರುಗಳನ್ನು ಒಳಗೊಂಡಿರುತ್ತದೆ. ಈ ಸಂಪನ್ಮೂಲ ವ್ಯಕ್ತಿ ಹೆಸರುಗಳ ಪಟ್ಟಿ(Panel) ತಯಾರಿಸಲು ಅಗತ್ಯ ಅನುಭವ ಹಾಗೂ ಆಯಾ ವಿಷಯಗಳ ಬಗ್ಗೆ ಆಳವಾದ ಜ್ಞಾನ ಹೊಂದಿರುವ ಹಾಗೂ ರಾಷ್ಟ್ರ/ರಾಜ್ಯಮಟ್ಟದಲ್ಲಿ ಈ ಹಿಂದೆ ಕಾರ್ಯನಿರ್ವಹಿಸಿರುವ ಅನುಭವುಳ್ಳ ಅರ್ಹ ಪ್ರತಿಭಾನ್ವಿತರುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸಲ್ಲಿಸಲು ಇಚ್ಛಿಸುವವರು ಸೂಕ್ತ ವಿದ್ಯಾರ್ಹತೆ ಮತ್ತು ಅಗತ್ಯ ದಾಖಲೆಗಳೊಂದಿಗೆ ದಿನಾಂಕ 16-8-2017 ರೊಗಳಗಾಗಿ ಆಯುಕ್ತರು(R&R) ಹಾಗೂ ಪ.ನಿ. ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ, ಕೊಠಡಿ ಸಂಖ್ಯೆ 510, 3 ನೇ ಹಂತ, 5 ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು ಈ ವಿಳಾಸಕ್ಕೆ ಅಂಚೆ ಮೂಲಕ ಅಥವಾ ಖುದ್ದಾ ಹಾಜರಾಗಲು ಅಧಿಕೃತ ಪ್ರಕಟಣೆ ತಿಳಿಸಿದೆ.

24/24

## ಆಯ್ಕೆ ಪಟ್ಟಿ ಪ್ರಕಟ

**ಬೆಂಗಳೂರು, ಆಗಸ್ಟ್ 7 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕ ಸೇವಾ ಆಯೋಗವು ದಿನಾಂಕ 24-08-2016 ರ ಅಧಿಸೂಚನೆಯಲ್ಲಿ ಅಧಿಸೂಚಿಸಲಾದ ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಪ್ರಾಂಶುಪಾಲರ 10+05 (ಹೈಕ) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ 05-08-2017 ರಂದು ಆಯೋಗದ ಅಂತರ್ಜಾಲದಲ್ಲಿ "http;//kpsc.kar.nic.in/selection List"ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಆಕ್ಷೇಪಣೆಗಳನ್ನು ಸಲ್ಲಿಸ ಬಯಸುವ ಅಭ್ಯರ್ಥಿಗಳು ದಿನಾಂಕ 11-08-2017 ರೊಳಗೆ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-560001, ಇವರಿಗೆ ಸಲ್ಲಿಸಬಹುದಾಗಿದೆ.

25/25

## Provisional select list

**Bangaluru, August 7(Karnataka Information)**

**In pursuance of this office notification dated: 24-08-2016 the Karnataka Public Service Commission has published provisional select list for recruitment to the post of 10+05(HK) posts of principal in MDRS in the Directorate of Minorities on 05-08-2017 in its web site**

"http;//kpsc.kar.nic.in/selection list" for the information of the candidates.

Candidates having any objections to this list may file the same on or before 11-08-2017 to the secretary, K.P.S.C., Udyoga Soudha, Bangaluru-560001. The objections received after specified date will not be considered.

26/27

# ಅಭ್ಯರ್ಥಿಗಳ ಅರ್ಹತಾ ಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 7 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕ ಸೇವಾ ಆಯೋಗದ ಅಧಿಸೂಚನೆ ದಿನಾಂಕ: 05–10–2016 ರಲ್ಲಿ 22–1—2016ರಲ್ಲಿ ಅಧಿಸೂಚಿಸಲಾಗಿರುವ ಆ ಕೆಳಕಂಡ ಹುದ್ದೆಗಳ 1:2 ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ದಿನಾಂಕ:05–08–2017 ರಂದು ಆಯೋಗದ ವೆಬ್ ಸೈಟ್ www.kpsc.kar.nic.in ನಲ್ಲಿ ಆಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

1. ಅಲ್ಪಸಂಖ್ಯಾತರ ನಿರ್ದೇಶನಾಲದಲ್ಲಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದಲ್ಲಿ ನಿಲಯಪಾಲಕರು ( ಪುರುಷ)– 81 (64+17 ಹೈ.ಕ.) ಹುದ್ದೆಗಳು
2. ಅಲ್ಪಸಂಖ್ಯಾತರ ನಿರ್ದೇಶನಾಲದಲ್ಲಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಸಮಾಜ ವಿಜ್ಞಾನ ಶಿಕ್ಷಕರು–28 ( 21+7 ಹೈ.ಕ.) ಹುದ್ದೆಗಳು

28/28

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿದ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 7 (ಕರ್ನಾಟಕ ವಾರ್ತೆ)

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕೀಯರ ಸ್ನಾತಕೋತ್ತರ, ವೃತ್ತಿಪರ, ಇಂಜನಿಯರಿಂಗ್, ವೈದ್ಯಕೀಯ ಮತ್ತು ನರ್ಸಿಂಗ್ ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ/ ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2017–18 ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಪ್ರವರ್ಗ-1, ಎಸ್.ಸಿ & ಎಸ್. ಟಿ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು ರೂ. 2.50 ಲಕ್ಷ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ಇವರಿಗೆ ರೂ. 1.00 ಲಕ್ಷದೊಳಗೆ ಇರಬೇಕಾಗಿದೆ. ಆನ್ ಲೇನ್ ಮೂಲಕ ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕ 26-08-2017

ತಾಲ್ಲೂಕುವಾರು ವಿದ್ಯಾರ್ಥಿನಿಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ ಸೈಟ್ www.backwardclasses.kar.nic.in ಅನ್ನು ನೋಡಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ- 080-4455444, 8867398974, 9845494101, 9740755556, 9901848678 ಸಪರ್ಕಿಸಿ.

## ಕರ್ನಾಟಕ ಮಾಧ್ಯಮ ಅಕಾಡೆಮಿಗೆ ಅಧಿಕಾರೇತರ ಸದಸ್ಯರ ನೇಮಕ

ಬೆಂಗಳೂರು, ಆಗಸ್ಟ್ 7 (ಕರ್ನಾಟಕ ವಾರ್ತೆ)

ಕರ್ನಾಟಕ ಮಾಧ್ಯಮ ಅಕಾಡೆಮಿಗೆ ಈ ಕೆಳಕಂಡಂತೆ ಅಧಿಕಾರೇತರ ಸದಸ್ಯರುಗಳನ್ನು ಈ ತಕ್ಷಣದಿಂದಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನಾಮ ನಿರ್ದೇಶನ ಮಾಡಿ ಆದೇಶಿಸಿದೆ.

ಹೆಚ್.ಬಿ.ಮದನಗೌಡ. (ಪ್ರಧಾನ ಸಂಪಾದಕರು,ಜನಿತ್ರ ಕನ್ನಡ ದಿನಪತ್ರಿಕೆ, ಹಾಸನ), ಹೆಚ್, ಆರ್ ರವೀಶ್ (ಹಿರಿಯ ವರದಿಗಾರರು, ಉದಯ ಟಿವಿ. ಬೆಂಗಳೂರು), ಎನ್.ರವಿಕುಮಾರ್ (ಸಂಪಾದಕರು, ಶಿವಮೊಗ್ಗ ಟೆಲೆಕ್ಸ್,ಶಿವಮೊಗ್ಗ), ನಿಂಗಪ್ಪ ಹೆಚ್. ಚಾವಡಿ, (ವ್ಯವಸ್ಥಾಪಕ ಸಂಪಾದಕರು, "ಮೂಡಣ ಕನ್ನಡ ದಿನಪತ್ರಿಕೆ" ಹೊಸನಗರ, ಹಾವೇರಿ), ಕೆ.ಎಸ್. ಗಣೇಶ್(ಜಿಲ್ಲಾವರದಿಗಾರರು, ಉದಯವಾಣಿ, ಕೋಲಾರ), ಎಂ.ಯು.ವೆಂಕಟೇಶಯ್ಯ(ಸಂಪಾದಕರು, "ಗ್ರಾಮೀಣ ಸಿಂಹ", ಬೆಂಗಳೂರು), ಗಣೇಶ್ ಕದಮ್(ವರದಿಗಾರರು, ಸಂಜೆವಾಣಿ,ಧಾರವಾಡ), ಗಂಗಾಧರ ಹಿರೇಗುತ್ತಿ (ಸಂಪಾದಕರು, "ಕರಾವಳಿ ಮಂಜಾವು' ಕಾರವಾರ), ಎನ್. ನಾಗರಾಜು(ಸಂಪಾದಕರು, ಈಶಾನ್ಯಟೈಮ್ಸ್" ರಾಯಚೂರು), ರಾಜಶೇಖರ ಕೋಟಿ(ಸಂಪಾದಕರು, "ಆಂದೋಲನ ದಿನಪತ್ರಿಕೆ", ಮೈಸೂರು) ಹಾಗೂ ಬೆಂಗಳೂರು ವಿಶ್ವವಿದ್ಯಾಲಯ, ಮಂಗಳೂರು ವಿಶ್ವವಿದ್ಯಾಲಯ ಮತ್ತು ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ಇವುಗಳ ಪತ್ರಿಕೋದ್ಯಮ ವಿಭಾಗಗಳ ಮುಖ್ಯಸ್ಥರುಗಳ ಹಾಗೂ ನಿರ್ದೇಶಕರು (ಬೆಂಗಳೂರು ಆಕಾಶವಾಣಿ ನಿಲಯ), ನಿರ್ದೇಶಕರು

(ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಸರ್ಕಾರ), ಕಾರ್ಯದರ್ಶಿಗಳು(ಕರ್ನಾಟಕ ಮಾಧ್ಯಮ ಅಕಾಡೆಮಿ, ಬೆಂಗಳೂರು)